ಪದವಿಪೂರ್ವ ಕಾಲೇಜುಗಳಲ್ಲಿ ಡಿಪ್ಲೊಮ ತರಗತಿಗಳ ಪ್ರಾರಂಭ

4567 (4821) : ಶ್ರೀ ಸದಾನಂದ ಗೌಡ ಡಿ.ವಿ. (ಪುತ್ತೂರು) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಈ ಶೈಕ್ಷಣಿಕ ವರ್ಷದಲ್ಲಿ ಪದವಿ ಪೂರ್ವ ಕಾಲೇಜುಗಳಲ್ಲಿ ಪದವಿ ಪೂರ್ವ ಡಿಪ್ಲೊಮಾ ತರಗತಿಗಳನ್ನು ಪ್ರಾರಂಭಿಸಲು ಉದ್ದೇಶಿಸಲಾಗಿದೆಯೇ;

ಆ) ಪ್ರಾರಂಭಿಸಲು ಉದ್ದೇಶಿಸಿದ್ದಲ್ಲಿ, ಯಾವ ವಿಷಯಗಳನ್ನು ಸೇರಿಸಲಾಗಿದೆ.

ಇ) ಈ ಸಂಬಂಧ ಪದವಿ ಪೂರ್ವ ಕಾಲೇಜುಗಳನ್ನು ಈಗಾಗಲೇ ಆಯ್ಕೆ ಮಾಡಲಾಗಿದೆಯೇ; ಆಯ್ಕೆ ಮಾಡಿದ್ದಲ್ಲಿ, ಅವು ಯಾವುವು ಮತ್ತು ಈ ಆಯ್ಕೆಯನ್ನು ಮಾಡಲು ಅನುಸರಿಸಿದ ಮಾನದಂಡವೇನು;

ಈ) ಆಯ್ಕೆ ಮಾಡಿದ ಪದವಿ ಪೂರ್ವ ಕಾಲೇಜುಗಳಿಗೆ ಈ ಸಂಬಂಧ ಹೆಚ್ಚುವರಿಯಾಗಿ ಏನೇನು ಅನುಕೂಲಗಳನ್ನು ಕಲ್ಪಿಸಲು ಉದ್ದೇಶಿಸಲಾಗಿದೆ?

ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಇಲ್ಲ.

ಆ) ಇ) ಈ) "ಅ" ಭಾಗಕ್ಕೆ ನೀಡಿರುವ ಉತ್ತರದ ಹಿನ್ನೆಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ವಿವಿಧ ಅಕಾಡೆಮಿಗಳ ಕಾರ್ಯನಿರ್ವಹಣೆ

4568 (4822) : ಶ್ರೀ ಡಿ.ವಿ. ಸದಾನಂದಗೌಡ (ಪುತ್ತೂರು) : ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವೆಯವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಅಕಾಡೆಮಿಗಳು ಕಾರ್ಯನಿರ್ವಹಿಸುತ್ತಿವೆ ಮತ್ತು ಅವು ಯಾವುವು?

ಆ) 2001-02 ರಿಂದ ಇಂದಿನವರೆಗೆ ಇವುಗಳ ವಾರ್ಷಿಕ ಖರ್ಚು ಎಷ್ಟು ಅಕಾಡೆಮಿವಾರು ವಿವರ ನೀಡುವುದು.

ಇ) ರಾಜ್ಯದಲ್ಲಿ ಉರ್ದು ಅಕಾಡೆಮಿ ಕಾರ್ಯ ನಿರ್ವಹಿಸುತ್ತಿದೆಯೇ?

ಈ) ಉರ್ದು ಅಕಾಡೆಮಿಯು ಪ್ರಸ್ತುತ ಕಾರ್ಯ ನಿರ್ವಹಿಸುತ್ತಿದ್ದಲ್ಲಿ ಅದರ ಕಾರ್ಯಕ್ರಮಗಳೇನು ಮತ್ತು ಸ್ಥಾಪನೆಯ ಉದ್ದೇಶವೇನು?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವೆಯವರು)

ಅ) ಕನ್ನಡ ಮತ್ತು ಸಂಸ್ಕೃತಿ ಇಲಾಖಾ ವ್ಯಾಪ್ತಿಯಲ್ಲಿ ಒಟ್ಟು 10 ಅಕಾಡೆಮಿಗಳು ಕೆಲಸ ನಿರ್ವಹಿಸುತ್ತಿವೆ. ಅವು

1) ಕರ್ನಾಟಕ ಲಲಿತಕಲಾ ಅಕಾಡೆಮಿ, ನಿ. ಬೆಂಗಳೂರು
2) ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಬೆಂಗಳೂರು
3) ಕರ್ನಾಟಕ ನಾಟಕ ಅಕಾಡೆಮಿ, ಬೆಂಗಳೂರು
4) ಕರ್ನಾಟಕ ಜಾನಪದ ಮತ್ತು ಯಕ್ಷಗಾನ ಅಕಾಡೆಮಿ, ಬೆಂಗಳೂರು

5) ಕರ್ನಾಟಕ ಸಾಹಿತ್ಯ ಅಕಾಡೆಮಿ, ಬೆಂಗಳೂರು.
6) ಕರ್ನಾಟಕ ಉರ್ದು ಅಕಾಡೆಮಿ, ಬೆಂಗಳೂರು
7) ಕರ್ನಾಟಕ ಶಿಲ್ಪಕಲಾ ಅಕಾಡೆಮಿ, ಬೆಂಗಳೂರು
8) ಕರ್ನಾಟಕ ಕೊಡ ಸಾಹಿತ್ಯ ಅಕಾಡೆಮಿ, ಮಡಿಕೇರಿ
9) ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ, ಮಂಗಳೂರು
10) ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ, ಮಂಗಳೂರು

ಆ)

ಕ್ರ. ಸಂ.	ಅಕಾಡಮಿ	2000–01	2001–02	2002–03
1.	ಕರ್ನಾಟಕ ಲಲಿತಕಲಾ ಅಕಾಡೆಮಿ	17,46,156	18,63,618	29,55,872
2.	ಕರ್ನಾಟಕ ಸಂಗೀತನೃತ್ಯ ಅಕಾಡೆಮಿ	15,59,936	19,37,325	21,21,765
3.	ಕರ್ನಾಟಕ ನಾಟಕ ಅಕಾಡೆಮಿ	21,13,105	18,95,999	21,82,413
4.	ಕರ್ನಾಟಕ ಜಾನಪದ ಮತ್ತು ಯಕ್ಷಗಾನ ಅಕಾಡೆಮಿ	32,63,028	25,11,053	20,29547
5.	ಕರ್ನಾಟಕ ಸಾಹಿತ್ಯ ಅಕಾಡೆಮಿ	13,26,293	16,41,416	21,19,202
6.	ಕರ್ನಾಟಕ ಉರ್ದು ಅಕಾಡೆಮಿ	22,00,000	20,98,000	21,19,010
7.	ಕರ್ನಾಟಕ ಶಿಲ್ಪಕಲಾ ಅಕಾಡೆಮಿ	49,67,749	19,98,157	17,30,621
8.	ಕರ್ನಾಟಕ ಕೂಡವ ಅಕಾಡೆಮಿ	8,00,000	7,00,000	11,50,000
9.	ಕರ್ನಾಟಕ ಕೊಂಕಣಿ ಸಾಹಿತ್ಯ ಅಕಾಡೆಮಿ	8,52,659	985,894	13,90,886
10.	ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ	9,31,019	9,19,304	16,05,605

ಇ) ಹೌದು.

ಈ) ಉರ್ದು ಭಾಷೆ ಮತ್ತು ಸಾಹಿತ್ಯದ ಸರ್ವತೋಮುಖ ಅಭಿವೃದ್ಧಿ ಮತ್ತು ಪ್ರೋತ್ಸಾಹದ ಉದ್ದೇಶದಿಂದ ಉರ್ದು ಅಕಾಡೆಮಿಯನ್ನು ಸ್ಥಾಪಿಸಲಾಗಿದೆ. ಪುಸ್ತಕಗಳ ಪ್ರಕಟಣೆ, ಪ್ರಶಸ್ತಿ ನೀಡುವುದು, ವಿಚಾರಸಂಕಿರಣ, ಸಾಂಸ್ಕೃತಿಕ ಕಾರ್ಯಕ್ರಮಗಳ ಏರ್ಪಾಡು, ಬರಹಗಾರರು ಮತ್ತು ಕವಿಗಳಿಗೆ ವೈದ್ಯಕೀಯ ನೆರವು, ವಿದ್ಯಾರ್ಥಿ ವೇತನ ನೀಡಿಕೆ, ಪುಸ್ತಕ ಬಹುಮಾನ ಮೊದಲಾದವು ಅದರ ಕಾರ್ಯಚಟುವಟಿಕೆಗಳಾಗಿವೆ.